ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 31–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ರಾಜ್ಯೋತ್ಸವ ಸಮಾರಂಭ ಮತ್ತು ಮಕ್ಕಳ ಮೇಳ – 2015:<br><br>ಧ್ವಜಾರೋಹಣ ಹಾಗೂ ರಾಜ್ಯೋತ್ಸವ ಸಂದೇಶ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ<br><br>ಅಧ್ಯಕ್ಷತೆ:<br><br>ಆರ್. ರೋಷನ್ ಬೇಗ್,<br>ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು<br><br>ಮುಖ್ಯ ಅತಿಥಿಗಳು:<br><br>ಕಿಮ್ಮನೆ ರತ್ನಾಕರ್,<br>ಪಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು<br><br>ರಾಮಲಿಂಗಾ ರೆಡ್ಡಿ,<br>ಸಾರಿಗೆ ಸಚಿವರು. | 01–11–2015<br><br>ಭಾನುವಾರ<br><br>ಬೆಳಿಗ್ಗೆ<br><br>9–00 ಗಂಟೆಗೆ | ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣ,<br><br>ಬೆಂಗಳೂರು. |

| | | | |
|---|---|---|---|
| 2 | ಬಾರಿಸು ಕನ್ನಡ ಡಿಂಡಿಮವ ಗೀತೆಯ ವಿಡಿಯೋ ಲೋಕಾರ್ಪಣೆ ಮತ್ತು ಡಿವಿಡಿ ಬಿಡುಗಡೆ ಸಮಾರಂಭ ಮತ್ತು 2015 ನೇ ಸಾಲಿನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ:<br><br>ಪ್ರಶಸ್ತಿ ಪ್ರಧಾನ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ<br><br>ಮುಖ್ಯ ಅತಿಥಿಗಳು:<br><br>ಶ್ರೀ ಅನಂತಕುಮಾರ್,<br><br>ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವರು,<br><br>ಶ್ರೀ ರಾಮಲಿಂಗಾರೆಡ್ಡಿ,<br>ಸಾರಿಗೆ ಸಚಿವರು<br><br>ಶ್ರೀಮತಿ ಉಮಾಶ್ರೀ,<br>ಕನ್ನಡ ಮತ್ತು ಸಂಸ್ಕೃತಿ ಸಚಿವರು | 01–11–2015<br><br>ಭಾನುವಾರ<br><br>ಸಂಜೆ<br><br>6–30 ಗಂಟೆಗೆ | ರವೀಂದ್ರ ಕಲಾಕ್ಷೇತ್ರ<br><br>ಜೆ.ಸಿ. ರಸ್ತೆ,<br><br>ಬೆಂಗಳೂರು |

ನಿರ್ದೇಶಕರ ಪರವಾಗಿ

## <u>ಪತ್ರಿಕಾ ಪ್ರಕಟಣೆ</u>

# <u>ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸಲು ಚಿಂತನೆ:</u>

. ಕಿಮ್ಮನೆ ರತ್ನಾಕರ್

ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)

ಸರ್ಕಾರಿ ಶಾಲೆಗಳಲ್ಲಿ ಇನ್ನು ಮುಂದೆ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲು ಚಿಂತಿಸಲಾಗಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರಾದ ಶ್ರೀ ಕಿಮ್ಮನೆ ರತ್ನಾಕರ್ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಚೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ನವೆಂಬರ್ 1 ರಂದು(ನಾಳೆ) ಬೆಂಗಳೂರು ನಗರದ ಕಂಠೀರವ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಸಮಾರಂಭವನ್ನು ಆಯೋಜಿಸಲಾಗಿದ್ದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದರು.

ಸಮಾರಂಭದಲ್ಲಿ ಸುಮಾರು ಹತ್ತು ಸಾವಿರ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ ಎಂದು ಮಾತನಾಡಿದ ಶ್ರೀ ಕಿಮ್ಮನೆ ರತ್ನಾಕರ್ ಅವರು ಈ ಭಾರಿ ಹೊರ ಜಿಲ್ಲೆಗಳಿಂದ ವಿಧ್ಯಾರ್ಥಿಗಳನ್ನು ಕರೆಸದೆ ಬೆಂಗಳೂರು ನಗರದ ಮಕ್ಕಳಿಂದಲೇ ಸುಮಾರು ಹತ್ತು ಸಾಮೂಹಿಕ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಮಮತ/ಕೆಪಿಪಿ//ಕೆಎಂ

## ದಿವಂಗತ ಸರ್ದಾರ್ ವಲ್ಲಭಭಾಯ್ ಪಟೇಲ್ ಜನ್ಮದಿನ ಮುಖ್ಯಮಂತ್ರಿ ಅವರಿಂದ ಪ್ರತಿಜ್ಞಾ ವಿಧಿ ಬೋಧನೆ

ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)

ದಿವಂಗತ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜನ್ಮದಿನದ ಅಂಗವಾಗಿ ವಿಧಾನ ಸೌಧಧ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ರಾಷ್ಟ್ರೀಯ ಏಕತಾ ದಿವಸ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಸಚಿವಾಲಯದ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ರಾಷ್ಟ್ರದ ಐಕ್ಯತೆ, ಸಮಗ್ರತೆ ಮತ್ತು ಭದ್ರತೆಯನ್ನು ಕಾಪಾಡಲು ನನ್ನನ್ನು ಅರ್ಪಿಸಿಕೊಳ್ಳುತ್ತೇನೆ ಹಾಗೂ ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ದೂರದೃಷ್ಠಿ ಮತ್ತು ಕಾರ್ಯಕ್ಷಮತೆಯಿಂದ ಸಾಧಿಸಿದ ರಾಷ್ಟ್ರೀಯ ಏಕೀಕರಣದ ಸ್ಫೂರ್ತಿಯನ್ನು ಕಾಪಾಡುತ್ತೇವೆ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಪ್ರತಿಜ್ಞಾವಿಧಿ ಬೋಧಿಸಿದರು. ಮುಖ್ಯಮಂತ್ರಿಯವರು ಸರ್ದಾರ್ ವಲ್ಲಭಾಯ್ ಪಟೇಲ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಬೆಂಗಳೂರು ಅಭಿವೃದ್ಧಿ ಸಚಿವರಾದ ಶ್ರೀ ಕೆ.ಜೆ. ಜಾರ್ಜ್, ಸಾರಿಗೆ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್, ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಶ್ರೀ ಕೌಶಿಕ್ ಮುಖರ್ಜಿ, ಸರ್ಕಾರದ ಅಪರ ಕಾರ್ಯದರ್ಶಿಗಳಾದ ಶ್ರೀ ನರಸಿಂಹರಾಜು, ಶ್ರೀ ಪಟ್ಟನಾಯಕ್ ಸೇರಿದಂತೆ ಸರ್ಕಾರದ ಉನ್ನತಮಟ್ಟದ ಅಧಿಕಾರಿಗಳು ಹಾಗೂ ಅಧಿಕಾರಿ ಸಿಬ್ಬಂದಿಗಳು ಸಭೆಯಲ್ಲಿ ಹಾಜರಿದ್ದರು.

ಮಮತ/ಕೆಪಿಪಿ/ಕೆಎಂ

# <u>ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ</u>

**ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ದಿನಾಂಕ: 25-9-2015 ರಲ್ಲಿ ಅಧಿಸೂಚಿಸಲಾದ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಕನ್ನಡ ಭಾಷಾ ಶಿಕ್ಷಕರು, ಆಂಗ್ಲ ಭಾಷಾ ಶಿಕ್ಷಕರು, ಹಿಂದಿ ಭಾಷಾ ಶಿಕ್ಷಕರು, ಉರ್ದು ಶಿಕ್ಷಕರು ಹಾಗೂ ಗಣಕಯಂತ್ರ ಶಿಕ್ಷಕರು, ಸಹಕಾರ ಇಲಾಖೆಯಲ್ಲಿನ ಸಹಕಾರ ಸಂಘಗಳ ನಿರೀಕ್ಷಕರು ಹಾಗೂ ವಾರ್ತಾ ಇಲಾಖೆಯಲ್ಲಿನ ಸ್ವಾಗತಕಾರರು ಹಾಗೂ ಗ್ರಂಥಪಾಲಕರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿನಾಂಕ: 29-10-2015 ರಂದು ಆಯೋಗದ ಅಂತರ್ಜಾಲ http://kpsc.kar.nic.in/Selection List/Provisional Selection List ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಈ ಮೂಲಕ ತಾತ್ಕಾಲಿಕ ಆಯ್ಕೆ ಪಟ್ಟಿಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು - 560 001 ಇವರಿಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

:ಬಾಬು:ಜಿಪಿಆರ್.

# <u>ಬೇಕರಿ ತರಬೇತಿ</u>

**ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)**

ಬೇಕರಿ ತರಬೇತಿ ಘಟಕದ ವತಿಯಿಂದ 4 ವಾರಗಳ ಬೇಕರಿ ತರಬೇತಿ ಹಾಗೂ ಬೇಕರಿ ತಂತ್ರಜ್ಞಾನದಲ್ಲಿ ಒಂದು ವರ್ಷದ ಡಿಪ್ಲೋಮ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. 4 ವಾರಗಳ ಬೇಕರಿ ತರಬೇತಿಯು ನವೆಂಬರ್ 2 ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್, ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು. ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ.

ಬೇಕರಿ ತಂತ್ರಜ್ಞಾನದಲ್ಲಿ ಒಂದು ವರ್ಷದ ಡಿಪ್ಲೋಮ ವಿದ್ಯಾರ್ಹಗೆ ಕನಿಷ್ಠ ಎಸ್.ಎಸ್.ಎಲ್.ಸಿ./ಹತ್ತನೇ ತರಗತಿ ಉತ್ತೀರ್ಣರಾಗಿರಬೇಕು. ಡಿಪ್ಲೋಮ ಪಡೆದವರಿಗೆ ಆಹಾರ ಮತ್ತು ಬೇಕರಿ ಉದ್ದಿಮೆಯಲ್ಲಿ ಉತ್ತಮ ಉದ್ಯೋಗವಕಾಶಗಳಿರುತ್ತವೆ. ಜೊತೆಗೆ ವಿವಿಧ ಆಹಾರ ಉದ್ದಿಮೆಗಳಲ್ಲಿ ಕೆಲಸ ನಿರ್ವಹಿಸಲು ಅವಕಾಶ ಮಾಡಿಕೊಡಲಾಗುವುದು.

ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 004 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080 – 23513370 ಮೂಲಕ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ.

ಬಾಬು:ಜಿಪಿಆರ್.

# ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)

ಉಡುಪಿಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಖಾಲಿಯಿರುವ ಶೀಘ್ರಲಿಪಿಗಾರರು ಮತ್ತು ಬೆರಳಚ್ಚು ನಕಲುಗಾರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಭರ್ತಿಮಾಡಿದ ಅರ್ಜಿಗಳನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಜಿಲ್ಲೆ, ಉಡುಪಿ ಇವರಿಗೆ ಡಿಸೆಂಬರ್ 5 ರೊಳಗೆ ಸಲ್ಲಿಸಬೇಕು.

ನಿಗದಿತ ಅರ್ಜಿ ನಮೂನೆಯನ್ನು ಉಡುಪಿ ಜಿಲ್ಲಾ ನ್ಯಾಯಾಲಯ, ಉಡುಪಿ, ಕುಂದಾಪುರ, ಕಾರ್ಕಳ ನ್ಯಾಯಾಲಯದ ಸೂಚನಾ ಫಲಕಗಳಲ್ಲಿ ಹಾಗೂ ರಾಜ್ಯದ ಇನ್ನಿತರ ನ್ಯಾಯಾಲಯದ ಸೂಚನಾ ಫಲಕಗಳಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಉಡುಪಿ ಜಿಲ್ಲಾ ನ್ಯಾಯಾಧೀಶರ ಕಚೇರಿಯನ್ನು ಸಂಪರ್ಕಿಸಬಹುದು.

:ಬಾಬು:ಜಿಪಿಆರ್.

# ಮಂಡ್ಯ, ಮೈಸೂರು ಜಿಲ್ಲೆಗಳಿಗೆ

ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ನವೆಂಬರ್ 2 ರಂದು ಮಂಡ್ಯ ಹಾಗೂ ಮೈಸೂರು ಜಿಲ್ಲೆಗಳಿಗೆ ಭೇಟಿ ನೀಡಿ ಅನುಸೂಚಿತ ಜಾತಿ ಮತ್ತು ಪಂಗಡಗಳ ಕಲ್ಯಾಣ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಪರಿಶೀಲನಾ ಸಭೆ ನಡೆಸಲಿದೆ.

ಮಂಡ್ಯ ಮತ್ತು ಮೈಸೂರು ಜಿಲ್ಲೆಗಳ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಸಭಾಂಗಣಗಳಲ್ಲಿ ಸಮಿತಿಯು ಸಭೆ ನಡೆಸಲಿದೆ. ಅಧ್ಯಕ್ಷರು ಸೇರಿದಂತೆ ಸಮಿತಿಯ ಒಟ್ಟು 20 ಮಂದಿ ಸದಸ್ಯರುಗಳು ಸಮಿತಿಯಲ್ಲಿರುತ್ತಾರೆ.

ಮಮತ/ಕೆಎಂ